ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಮು.ಅ/ಯ.ವ/ತಾಂ.ಮ/190/2014–15

ಮುಖ್ಯ ಅಭಿಯಂತರವರ ಕಛೇರಿ
ಯಲಹಂಕ ವಲಯ, ಬೃ.ಬೆಂ.ಮ.ಪಾ.
ಬೆಂಗಳೂರು–92
ದಿನಾಂಕ: 24-02-2014

ತಾಂತ್ರಿಕ ಮಂಜೂರಾತಿ

ವಿಷಯ:– **Improvements to Roads and Drains at Bhuvensawaranagar Main Road Left Side in Ward No. 6 in Dasarahalli Village Limits.**

ಉಲ್ಲೇಖ:1. ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ, ಕಾಮಗಾರಿ ಸಂಕೇತ:
2. ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ:ಬೃ.ಬೆಂ.ಮ.ಪಾ/ಅ.ಆ/ಯ.ವ/ಆ.ಅ/565/2013–14 ದಿ:23.12.2013
3. ಈ ಹಿಂದೆ ನೀಡಲಾಗಿರುವ ತಾಂತ್ರಿಕ ಮಂಜೂರಾತಿ ಸಂಖ್ಯೆ: ಬೃ.ಬೆಂ.ಮ.ಪಾ/ ಕಾ.ಅ/ಯ.ವ/ತಾಂ.ಮ /190/2013–14 ದಿ:23.12.2013
4. ಸದರಿ ಮಾರ್ಪಾಡಿತ ಅಂದಾಜು ಪಟ್ಟಿಗೆ ಕಡತದ ಕಂಡಿಕೆ( )ರಲ್ಲಿ ಮುಖ್ಯ ಅಭಿಯಂತರರು(ಯಲಹಂಕ ವಲಯ)ರವರು ಅನುಮೋದನೆ ನೀಡಿರುತ್ತಾರೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪು ಉಪ ವಿಭಾಗ) ರವರು **2013–14ನೇ** ಸಾಲಿನ **ಕೆ.ಪಿ.ಡಬ್ಲ್ಯೂ.ಡಿ. ಎಸ್.ಆರ್** ದರಪಟ್ಟಿಯನ್ವಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದ ಪಿ–2654, ಅನುದಾನದಡಿಯಲ್ಲಿ ಮೇಲ್ಕಂಡ ಕಾಮಗಾರಿಗೆ ಉಲ್ಲೇಖ(3)ರಂತೆ ತಾಂತ್ರಿಕ ಮಂಜೂರಾತಿಯನ್ನು **ರೂ. 60.00** ಲಕ್ಷಗಳಿಗೆ ನೀಡಲಾಗಿದ್ದು ಸದರಿ ಅಂದಾಜು ಪಟ್ಟಿಯನ್ನು ಮಾರ್ಪಾಡಿಸಲಾಗಿದ್ದು, ಈ ಹಿಂದೆ ನೀಡಲಾಗಿರುವ ತಾಂತ್ರಿಕ ಮಂಜೂರಾತಿಯನ್ನು ರದ್ದುಗೊಳಿಸಲಾಗಿರುತ್ತದೆ.

ಸದರಿ ಅಂದಾಜು ಪಟ್ಟಿಯಲ್ಲಿ ಕೆಲವು ಅಂಶಗಳಿಗೆ 2013–14ನೇ ಸಾಲಿನ **ಕೆ.ಪಿ.ಡಬ್ಲ್ಯೂ.ಡಿ. ಎಸ್.ಆರ್** ದರಪಟ್ಟಿಯನ್ವಯ ಅಂದಾಜು ಪಟ್ಟಿಯನ್ನು ಮಾರ್ಪಾಡು ಮಾಡಲಾಗಿದ್ದು, ರೂ. 60.00 ಲಕ್ಷಗಳಿಗೆ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ.

ಉಲ್ಲೇಖ (1) ರಂತೆ ಕಾಮಗಾರಿ ಸಂಕೇತ ಹಾಗೂ ಉಲ್ಲೇಖ (2) ರಂತೆ ಜಂಟಿ ಆಯುಕ್ತರು ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ **ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011–12 ದಿನಾಂಕ:21–07–2013**ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ತಾಂತ್ರಿಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ 142 ಕ್ರ.ಸಂ 190 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಮುಖ್ಯ ಅಭಿಯಂತರರು
ಯಲಹಂಕ ವಲಯ
ಬಿ.ಬಿ.ಎಂ.ಪಿ, ಬೆಂಗಳೂರು–92.

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ ಯಲಹಂಕ ವಲಯರವರ ಮಾಹಿತಿಗಾಗಿ.
2. ಅಧೀಕ್ಷಕ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.